# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ | : | 72 (701) |
| ಸದಸ್ಯರ ಹೆಸರು | : | ಶ್ರೀ ಎಸ್ ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.08.2025. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2021-22ನೇ ಸಾಲಿನಲ್ಲಿ ಮರು ಹೊಂದಾಣಿಕೆ ಸಮಯದಲ್ಲಿ ಆಯಾ ಜಿಲ್ಲೆಗಳಲ್ಲಿ ಮಂಜೂರಾಗಿದ್ದ ದೈಹಿಕ ಶಿಕ್ಷಕರ ಹುದ್ದೆಯನ್ನು ಬೇರೆ ಜಿಲ್ಲೆಗೆ ಸ್ಥಳಾಂತರ ಮಾಡದೆ ಅದೇ ಜಿಲ್ಲೆಯಲ್ಲಿ ಖಾಲಿ ಹುದ್ದೆಗಳನ್ನು ಮುಂದುವರಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ಹಾಗೂ ಕಾಲಮಿತಿ ಎಷ್ಟು; | 1. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ-2020 ರ ಕಲಂ 04 ರಲ್ಲಿ **"ಪ್ರತಿ ಪರ್ಯಾಯ ವರ್ಷವೂ ಮಂಜೂರಾದ ಹುದ್ದೆಗಳು ಹಾಗೂ ಅದರಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ರಾಜ್ಯ ಸರ್ಕಾರ ಕಾಲ-ಕಾಲಕ್ಕೆ ನಿಗಧಿಪಡಿಸಿದ ಶಿಷ್ಯ-ಶಿಕ್ಷಕ ಅನುಪಾತದ ಆಧಾರದ ಮೇಲೆ ಸಮರ್ಪಕವಾಗಿ ಮರುಹಂಚಿಕೆ ಮಾಡತಕ್ಕದ್ದು."** ಎಂದು ಇರುವುದರಿಂದ 02 ವರ್ಷಗಳಿಗೊಮ್ಮೆ ಹೆಚ್ಚುವರಿ ಪ್ರಕ್ರಿಯೆ ಮಾಡಲಾಗುವುದು.<br>2. ರಾಜ್ಯದ ಪ್ರತಿ ಸರ್ಕಾರಿ ಪ್ರೌಢಶಾಲೆಗಳಿಗೆ 01 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಿ ನಿಗಧಿಪಡಿಸಲಾಗಿದೆ.<br>3. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು(ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2020 ರ ನಿಯಮ (14) ರ ಉಪನಿಯಮ (5) ರಲ್ಲಿ **"ಜಿಲ್ಲೆಯ ವ್ಯಾಪ್ತಿಯೊಳಗೆ ಖಾಲಿ ಹುದ್ದೆಗಳು ಲಭ್ಯವಿಲ್ಲದಿದ್ದರೆ, ಆಗ ಅಧಿಕ ಸಂಖ್ಯೆಯ ಶಿಕ್ಷಕರನ್ನು ಜಿಲ್ಲೆಯ ವ್ಯಾಪ್ತಿಯೊಳಗೆ ಪಿಟಿಆರ್ ಅನುಪಾತವನ್ನು ಹೊಂದಿರುವ ಶಾಲೆಗಳಿಗೆ ವರ್ಗಾವಣೆ ಮಾಡತಕ್ಕದ್ದು."** ಎಂದು ಇರುವುದರಿಂದ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಬೇರೆ ಜಿಲ್ಲೆಗಳಿಗೆ ಸ್ಥಳಾಂತರ ಮಾಡುವುದಿಲ್ಲ.<br>**ಪ್ರಸ್ತುತ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ಈಗಾಗಲೇ ಅಗತ್ಯ ಕ್ರಮವಹಿಸಲಾಗಿದೆ.** |

| | | |
|---|---|---|
| ಆ) | ಸೇವಾ ಅವಧಿಯ ಕೊನೆವರೆಗೂ ದೈಹಿಕ ಶಿಕ್ಷಕರು ವರ್ಗಾವಣೆಯಿಂದ ವಂಚಿತರಾಗಿದ್ದು, ಸದರಿ ಶಿಕ್ಷಕರ ವರ್ಗಾವಣೆ ಮತ್ತು ಹೆಚ್ಚುವರಿ ಮರು ಹೊಂದಾಣಿಕೆ ಬಗ್ಗೆ ಸರ್ಕಾರದ ನಿಲುವುಗಳೇನು; | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರಿಗೆ **ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2020ರ** ನಿಯಮಗಳಂತೆ ಕೋರಿಕೆ ಅರ್ಜಿ ಸಲ್ಲಿಸಿ ಖಾಲಿ ಹುದ್ದೆಗಳು ಲಭ್ಯವಿದ್ದಲ್ಲಿ ವರ್ಗಾವಣೆ ಪಡೆಯಲು ಅವಕಾಶವಿರುತ್ತದೆ.<br>2023-24 ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಯಲ್ಲಿ ಕೋರಿಕೆ ವರ್ಗಾವಣೆಗೆ ಒಟ್ಟು 911 ಅರ್ಹ ಪ್ರಾಥಮಿಕ ಶಾಲಾ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರಲ್ಲಿ 319 ದೈಹಿಕ ಶಿಕ್ಷಣ ಶಿಕ್ಷಕರು ಬೇರೆ ಶಾಲೆಗೆ ವರ್ಗಾವಣೆ ಪಡೆದಿರುತ್ತಾರೆ. ಪ್ರಯುಕ್ತ ದೈಹಿಕ ಶಿಕ್ಷಣ ಶಿಕ್ಷಕರು ವರ್ಗಾವಣೆಯಿಂದ ವಂಚಿತರಾಗುವುದಿಲ್ಲ.<br>2023-24 ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಯಲ್ಲಿ ಕೋರಿಕೆ ವರ್ಗಾವಣೆಗೆ ಒಟ್ಟು 1338 ಅರ್ಹ ಪ್ರೌಢಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರಲ್ಲಿ 448 ದೈಹಿಕ ಶಿಕ್ಷಣ ಶಿಕ್ಷಕರು ಬೇರೆ ಶಾಲೆಗೆ ವರ್ಗಾವಣೆ ಪಡೆದಿರುತ್ತಾರೆ. ಪ್ರಯುಕ್ತ ದೈಹಿಕ ಶಿಕ್ಷಣ ಶಿಕ್ಷಕರು ವರ್ಗಾವಣೆಯಿಂದ ವಂಚಿತರಾಗುವುದಿಲ್ಲ. |
| ಇ) | ಬಹಳ ವರ್ಷಗಳಿಂದ 200 ವಿದ್ಯಾರ್ಥಿಗಳಿಗೆ ನಿಗದಿಯಾಗಿದ್ದ ದೈಹಿಕ ಶಿಕ್ಷಕರ ಹುದ್ದೆಯನ್ನು 50-100 ವಿದ್ಯಾರ್ಥಿಗಳಿಗೆ ಮರು ನಿಗದಿ ಮಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ವಹಿಸಲಾಗುವುದೇ ಮತ್ತು ಕಾಲಮಿತಿ ಎಷ್ಟು; ಹೆಚ್ಚುವರಿ ಪ್ರಕ್ರಿಯೆಯಲ್ಲಿ ಜಿಲ್ಲಾ ಘಟಕವನ್ನು ಮಾಡದೆ ತಾಲ್ಲೂಕಿನಲ್ಲಿ ಇಳಿಕೆ ಕ್ರಮಾಂಕ ಮಾಡಿ ತಾಲ್ಲೂಕು ಘಟಕ ಮಾಡುವ ಸಂಬಂಧ ಯಾವ ಕಾಲಮಿತಿಯನ್ನು ಸರ್ಕಾರ ಕ್ರಮ ಕೈಗೊಳ್ಳುವುದು; | ರಾಜ್ಯದಲ್ಲಿ ಲಭ್ಯ 6772 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಮೊದಲ ಹಂತದಲ್ಲಿ 200 ಕ್ಕಿಂತ ಹೆಚ್ಚು ಮಕ್ಕಳಿರುವ ಎಲ್ಲಾ ಶಾಲೆಗಳಿಗೂ ಹುದ್ದೆಗಳನ್ನು ಮರುಹೊಂದಾಣಿಕೆ ಮಾಡಲಾಗಿದೆ. ನಂತರ ಕಾರ್ಯನಿರತ ದೈಹಿಕ ಶಿಕ್ಷಣ ಶಿಕ್ಷಕರು ಇರುವ ಜಿಲ್ಲೆಗಳಲ್ಲಿ ದಾಖಲಾತಿ 100 ಕ್ಕಿಂತ ಹೆಚ್ಚು ಇರುವ ಶಾಲೆಗಳಿಗೆ ಮಾತ್ರ ಮರುಹೊಂದಾಣಿಕೆ ಮಾಡಲಾಗಿದೆ. ಮೇಲಿನಂತೆ ಹುದ್ದೆ ಮರುಹಂಚಿಕೆ ಮಾಡಿದ ನಂತರ ಜಿಲ್ಲೆಯಲ್ಲಿ ಕಾರ್ಯನಿರತ ಶಿಕ್ಷಕರ ಸಂಖ್ಯೆ ಮಂಜೂರಾದ ಹುದ್ದೆಗಳ ಸಂಖ್ಯೆಗಿಂತ ಸಮ/ಹೆಚ್ಚಾಗಿದ್ದಲ್ಲಿ ಅದನ್ನು ಸರಿದೂಗಿಸಲು ಜಿಲ್ಲೆಯ ದಾಖಲಾತಿ ಇಳಿಕೆ ಕ್ರಮದಲ್ಲಿ ರಾಜ್ಯ ಸರಾಸರಿ ಖಾಲಿ ಹುದ್ದೆಗಳಷ್ಟು ಜಿಲ್ಲೆಯಲ್ಲಿ ಹುದ್ದೆ ಲಭ್ಯವಾಗುವಂತೆ ಸರಿದೂಗಿಸಲು ಹುದ್ದೆಗಳನ್ನು ಮರುಹೊಂದಾಣಿಕೆ ಮಾಡಲಾಗಿದೆ. |
| ಈ) | ರಾಜ್ಯದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ 6772 ಹುದ್ದೆಗಳು ಮಾತ್ರ ಮಂಜೂರಾಗಿದ್ದು, ಎಚ್.ಪಿ.ಎಸ್. ಶಾಲೆಗಳ ಸಂಖ್ಯೆ 21 ಸಾವಿರಕ್ಕೂ ಅಧಿಕ ಇದ್ದು, ಇದರಿಂದ ಕ್ರೀಡಾ ಚಟುವಟಿಕೆ ಕ್ರೀಡಾಕೂಟ ಹಾಗೂ ಆ ದೈಹಿಕ ಶಿಕ್ಷಣ ಕಲಿಕೆಯಿಂದ ಆ | ಬಂದಿದೆ.<br>ಪ್ರತಿ ವರ್ಷವು ಕ್ರೀಡಾ ಚಟುವಟಿಕೆ ನಿರಂತರವಾಗಿ ನಡೆಯುತ್ತಿದೆ.. ಹಿರಿಯ ಪ್ರಾಥಮಿಕ ಶಾಲೆಗಳಲ್ಲಿರುವ ದೈಹಿಕ ಶಿಕ್ಷಣ ಶಿಕ್ಷಕರು ಪ್ರೌಢ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರ ಸಹಕಾರದೊಂದಿಗೆ ಕ್ರೀಡಾಕೂಟಗಳಂತಹ |

| | | |
|---|---|---|
| | ತಾಲ್ಲೂಕಿನ ಮಕ್ಕಳು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಟುವಟಿಕೆಗಳನ್ನು ನಡೆಸುತ್ತಿದ್ದಾರೆ ಹಾಗೂ ಅನೇಕ ಜಿಲ್ಲೆಗಳಲ್ಲಿ ತಾತ್ಕಾಲಿಕವಾಗಿ ಉಪನಿರ್ದೇಶಕರ ಹಂತದಲ್ಲಿಯೇ ಖಾಲಿಯಿರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗೆ ವಾರದಲ್ಲಿ ಮೂರು ದಿನ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದು, ಕ್ರೀಡಾ ಚಟುವಟಿಕೆಗಳು ಸುಗಮವಾಗಿ ನಡೆಯುತ್ತಿವೆ. |
| ಊ) | ಹಾಗಿದ್ದಲ್ಲಿ, ದೈಹಿಕ ಶಿಕ್ಷಕರನ್ನು ನೇಮಿಸುವ ಸಲುವಾಗಿ ಸರ್ಕಾರದ ಮುಂದಿನ ಕ್ರಮಗಳೇನು: | **ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br>1. ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ:07.10.2024 ರ ಆದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ 216 ಹುದ್ದೆಗಳನ್ನು ಸೇರಿ ಪ್ರೌಢ ಶಾಲೆಗಳಿಗೆ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>2. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 388 ಸೇನೇನಿ 2024 ದಿನಾಂಕ: 25/11/2024 ರ ಆದೇಶದಲ್ಲಿ ದಿನಾಂಕ 28/10/2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. ಸದರಿ ಆದೇಶವನ್ನು ತೆರವುಗೊಳಿಸಿದ ಕೂಡಲೇ ನೇಮಕಾತಿ ಪ್ರಕ್ರಿಯೆ ಜಾರಿ ಮಾಡಲು ಕ್ರಮವಹಿಸಲಾಗುವುದು.<br>3. **2025-26 ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ:119ರಲ್ಲಿ** "ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 5267 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಮುಂದುವರೆದು, **ಇಲಾಖೆಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ 5000 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು**" ಎಂದು ಘೋಷಣೆ ಮಾಡಲಾಗಿದೆ. ಶಿಕ್ಷಕರ ಹುದ್ದೆಗಳ ಸಮರ್ಪಕ ಮರುಹೊಂದಾಣಿಕೆ ಪ್ರಕ್ರಿಯೆ ಮುಗಿದ ನಂತರದ ಖಾಲಿ ಹುದ್ದೆಗಳಿಗೆ ನೇಮಕಾತಿಗೆ ನಿಯಮಗಳಂತೆ ಕ್ರಮವಹಿಸಲಾಗುವುದು. |

| | | |
|---|---|---|
| ಊ) | ಪ್ರಸ್ತುತ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದ್ದು, ಮಲೆನಾಡು ಭಾಗಕ್ಕೆ 50 ಮತ್ತು ಇತರೆ ಜಿಲ್ಲೆಗಳಲ್ಲಿ 100 ವಿದ್ಯಾರ್ಥಿಗಳು ಇರುವ ಕಡೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರನ್ನು ಹೆಚ್ಚುವರಿ ಎಂದು ಪರಿಗಣಿಸದೆ ಮಕ್ಕಳ ಸಂಖ್ಯೆಯನ್ನು 50-100ಕ್ಕೆ ಮರುನಿಗದಿ ಮಾಡುವ ಸಂಬಂಧ ಸರ್ಕಾರದ ಕ್ರಮಗಳೇನು; | ಈಗಾಗಲೇ ಪ್ರಸಕ್ತ ಸಾಲಿನಲ್ಲಿ ಶಿಕ್ಷಕರ ವರ್ಗಾವಣೆ ಮತ್ತು ಹೆಚ್ಚುವರಿ ಶಿಕ್ಷಕರ ಸಮರ್ಪಕ ಮರುಹೊಂದಾಣಿಕೆ ಕ್ರಮಗಳು ಚಾಲ್ತಿಯಲ್ಲಿರುವುದರಿಂದ ಈ ಹಂತದಲ್ಲಿ ನಿಯಮಗಳನ್ನು ಸಡಿಲಿಸಿ ಹುದ್ದೆಗಳನ್ನು ಮರುನಿಗದಿ ಮಾಡಲು ಅವಕಾಶವಿರುವುದಿಲ್ಲ. |
| ಋ) | ದೈಹಿಕ ಶಿಕ್ಷಣ ಶಿಕ್ಷಕರಿಗೂ ಸಹ ಆರೋಗ್ಯ, ವಯೋಮಿತಿ ಮತ್ತು ಇತರೆ ಕಾರಣಗಳಿಂದ ನೀಡುವ ವಿನಾಯಿತಿಗಳನ್ನು ನೀಡಿ ದೈಹಿಕ ಶಿಕ್ಷಣ ಶಿಕ್ಷಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರದ ಮುಂದಿನ ಹೆಜ್ಜೆಗಳೇನು; ಹಾಗೂ ಇದರ ಕಾಲಮಿತಿ ಎಷ್ಟು? | ಯಾವುದಾದರೂ ಶಾಲೆಯಲ್ಲಿ ಯಾವುದೇ ವೃಂದದ ಒಂದೇ ಹುದ್ದೆ ಇದ್ದು ಅಥವಾ ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ಹುದ್ದೆ ಸಹಿತ ಹೆಚ್ಚುವರಿಯಾಗಿದ್ದಲ್ಲಿ (ಹುದ್ದೆ ರದ್ದಾದ ಕಾರಣ) ಸದರಿ ಶಿಕ್ಷಕರು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2020 ನಿಯಮ-10 ರಲ್ಲಿನ ವಿನಾಯಿತಿಗಳನ್ನು ಕೋರಲು ಅವಕಾಶವಿರುವುದಿಲ್ಲ. ಒಂದು ವೇಳೆ ವಿನಾಯಿತಿ ಕೋರಿದ್ದಲ್ಲಿ ಸಕ್ಷಮ ಪ್ರಾಧಿಕಾರಿಗಳು ವಿನಾಯಿತಿಯನ್ನು ತಿರಸ್ಕರಿಸುವ ಹಕ್ಕು ಹೊಂದಿರುತ್ತಾರೆ., ಪ್ರಯುಕ್ತ ಅಂತಹವರನ್ನು ವಿನಾಯಿತಿ ನೀಡದೇ ಹೆಚ್ಚುವರಿ ಸಮರ್ಪಕ ಮರುಹೊಂದಾಣಿಕೆ ವರ್ಗಾವಣೆಗೆ ಪರಿಗಣಿಸತಕ್ಕದ್ದು. (ಉದಾ: ಶೂನ್ಯ ದಾಖಲಾತಿ ಇರುವ ಶಾಲೆಯಲ್ಲಿ ಕರ್ತವ್ಯ ನಿರತ ಶಿಕ್ಷಕರು, ಹೆಚ್ಚುವರಿ ಎಂದು ಗುರುತಿಸಿರುವ ವಿಷಯ ಶಿಕ್ಷಕರು, ಮುಖ್ಯಶಿಕ್ಷಕರು, ಹಿರಿಯ ಮುಖ್ಯ ಶಿಕ್ಷಕರು, ದೈಹಿಕ ಶಿಕ್ಷಕರು,(ಪ್ರಾಥಮಿಕ ಮತ್ತು ಪ್ರೌಢ) ವಿಶೇಷ ಶಿಕ್ಷಕರು ಅಥವಾ ಆ ಶಾಲೆಗೆ ಹುದ್ದೆ ಮಂಜೂರಾತಿ ಆಗಿಲ್ಲದೇ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು..............ಇತ್ಯಾದಿ.) |

**ಸಂಖ್ಯೆ: ಇಪಿ 255 ಎಸ್ಇಎಸ್ 2025**

**(ಎಸ್. ಮಧುಬಂಗಾರಪ್ಪ )**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**